ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 11/11/2019

# ಶಾ, ಬಿಎಸ್‌ವೈ ವಿರುದ್ಧ ರಾಷ್ಟ್ರಪತಿಗೆ ಸಿದ್ದು ದೂರು

## ಆಪರೇಷನ್ ಕಮಲದ ಆರೋಪ। ಖುದ್ದು ಭೇಟಿಯಾಗಿ ವಿವರ ನೀಡಲು ಕಾಲಾವಕಾಶ ಕೋರಿಕೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 11/11/19



'ಅನರ್ಹ ಶಾಸಕರ ರಾಜೀನಾಮೆ ಕೊಡಿಸಿ ರಾಜ್ಯ ಸಮ್ಮಿಶ್ರ ಸರ್ಕಾರ ಪತನಗೊಳಿಸಿದ್ದರ ಹಿಂದೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಹಾಗೂ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ನೇರ ಪಾತ್ರವಿದೆ. ಈ ಬಗ್ಗೆ ಯಡಿಯೂರಪ್ಪ ಅವರೇ ಒಪ್ಪಿಕೊಂಡಿದ್ದು, ಆಪರೇಷನ್ ಕಮಲದ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು' ಎಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರೂ ಆಗಿರುವ ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರಿಗೆ ಪತ್ರ ಬರೆದಿದ್ದಾರೆ. ಅಲ್ಲದೆ, ಆಪರೇಷನ್ ಕಮಲದ ಕುರಿತಾಗಿ ಹಲವು ವಿಚಾರಗಳನ್ನು ಮನವರಿಕೆ ಮಾಡಿಕೊಡಲು ಕಾಂಗ್ರೆಸ್ ನಿಯೋಗದ ಭೇಟಿಗೆ ಅನುಮತಿ ನೀಡುವಂತೆಯೂ ಪತ್ರದಲ್ಲಿ ಕೋರಿದ್ದಾರೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಅ.27ರಂದು ಹುಬ್ಬಳ್ಳಿಯಲ್ಲಿ ನಡೆದ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲಿ 17 ಶಾಸಕರ ರಾಜೀನಾಮೆ ಹಾಗೂ ತ್ಯಾಗದಿಂದಾಗಿ ಬಿಜೆಪಿ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿದೆ. ಅಲ್ಲದೆ, ಅನರ್ಹ ಶಾಸಕರು ಕೇಂದ್ರ ಗೃಹ ಸಚಿವ ಹಾಗೂ ಬಿಜೆಪಿ ರಾಷ್ಟ್ರಾಧ್ಯಕ್ಷ ಅಮಿತ್ ಶಾ ಸೂಚನೆಯಂತೆ ಅವರ ಮಾರ್ಗದರ್ಶನದಲ್ಲೇ ರಾಜೀನಾಮೆ ನೀಡಿದ್ದಾರ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಈ ಬಗ್ಗೆಯ ಧ್ವನಿ ಸುರುಳಿಯೂ ಲಭ್ಯವಿದೆ ಎಂದು ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಸಿಬಿಐ, ಆದಾಯ ತೆರಿಗೆ ಇಲಾಖೆ ಹಾಗೂ ಜಾರಿ ನಿರ್ದೇಶನಾಲಯವನ್ನು ಬಿಜೆಪಿ ಕಾನೂನುಬಾಹಿರವಾಗಿ ಬಳಕೆ ಮಾಡಿಕೊಂಡು ಶಾಸಕರನ್ನು ಹೆದರಿಸಿರುವುದು ಯಡಿಯೂರಪ್ಪ ಅವರ ಮಾತಿನಿಂದಲೇ ಸಾಬೀತಾಗಿದೆ. ಯಡಿಯೂರಪ್ಪ ರಾಜ್ಯ ಜನತೆಯ ಜನಾದೇಶದ ವಿರುದ್ಧವಾಗಿ ಹಾಗೂ ಸಂವಿಧಾನ ಉಲ್ಲಂಘಿಸಿ ಸರ್ಕಾರ ರಚನೆ ಮಾಡಿದ್ದಾರೆ. ಪ್ರಜಾಪ್ರಭುತ್ವ ಮೌಲ್ಯಗಳು ಹಾಗೂ ಸಂವಿಧಾನದ ಕಾನೂನುಗಳನ್ನು ಮುರಿದಿದ್ದಾರೆ. ಈ ಎಲ್ಲಾ ಅಸಾಂವಿಧಾನಿಕ ನಡೆಗಳು ಸಾಂವಿಧಾನಿಕ ಹುದ್ದೆಗಳನ್ನು ಅಲಂಕರಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಸಿಎಂ ಯಡಿಯೂರಪ್ಪ ಅವರಿಂದಲೇ ನಡೆದಿವೆ. ಹೀಗಾಗಿ ದೇಶದ ಸಾಂವಿಧಾನಿಕ ಮುಖ್ಯಸ್ಥರಾಗಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಕರ್ನಾಟಕದ ವಾಸ್ತವ ಸ್ಥಿತಿ ಮನವರಿಕೆ ಮಾಡಿಕೊಡಲು ವಿಧಾನಸಭೆ ವಿರೋಧಪಕ್ಷದ ನಾಯಕನಾದ ನಾನು ಹಾಗೂ ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ವಿಧಾನಪರಿಷತ್ ವಿರೋಧಪಕ್ಷದ ನಾಯಕ ಎಸ್.ಆರ್. ಪಾಟೀಲ್, ಮಾಜಿ ಮುಖ್ಯಮಂತ್ರಿಗಳು, ತಮ್ಮನ್ನು ಭೇಟಿ ಮಾಡಲು ಅನುಮತಿ ನೀಡಬೇಕು ಎಂದು ಮನವಿ ಮಾಡಿದ್ದಾರೆ.

### 200 ನಾಯಕರ ಭೇಟಿ

**ಸಿದ್ದರಾಮಯ್ಯ ಅವರು ರಾಷ್ಟ್ರಪತಿಗಳಿಗೆ ಪತ್ರ ಬರೆದು ಭೇಟಿಗೆ ಅವಕಾಶ ಕೇಳಿದ್ದಾರೆ. ಸಂವಿಧಾನದ ಆಶಯ ಹಾಗೂ ಸ್ಪರ್ಧಿಸಿದ ಪಕ್ಷ ಎಲ್ಲಕ್ಕೂ ದ್ರೋಹ ಬಗೆದು ಬಿಜೆಪಿ 17 ಶಾಸಕರನ್ನು ಸೆಳೆದಿದೆ. ಅಮಿತ್ ಶಾ, ಯಡಿಯೂರಪ್ಪ ಅವರನ್ನು ವಜಾಗೊಳಿಸುವಂತೆ ಕೋರಲು ರಾಷ್ಟ್ರಪತಿಗಳ ಭೇಟಿಗೆ ಅವಕಾಶ ಕೇಳಿದ್ದೇವೆ. 150ರಿಂದ 200 ಪ್ರಮುಖ ನಾಯಕರು ಭೇಟಿ ಮಾಡುತ್ತೇವೆ. ಅವಕಾಶ ಸಿಗುವ ವಿಶ್ವಾಸವಿದೆ.**

• **ವಿ.ಎಸ್. ಉಗ್ರಪ್ಪ** ಕೆಪಿಸಿಸಿ ಮಾಧ್ಯಮ ವಿಭಾಗದ ಅಧ್ಯಕ್ಷ

4